Akashvani: Bangalore
National Bulletin In Kannada
22.05.2026: 7.35AM
**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**
22.05.2026: 7.35AM

**ಮುಖ್ಯಾಂಶಗಳು :**

1. ಸೈಪ್ರಸ್ ಅಧ್ಯಕ್ಷರ ಭಾರತ ಭೇಟಿ: ಪ್ರಧಾನಿ ನರೇಂದ್ರ ಮೋದಿ ಜೊತೆ ಇಂದು ದ್ವಿಪಕ್ಷೀಯ ಮಾತುಕತೆ
2. ಜೂನ್ ೧ ರಂದು ನಿಗದಿಯಾಗಿದ್ದ ಪ್ರಥಮ ಅಂತಾರಾಷ್ಟ್ರೀಯ ಬಿಗ್ ಕ್ಯಾಟ್ ಅಲಯನ್ಸ್ ಶೃಂಗಸಭೆ ಕಾರಣಾಂತರದಿಂದ ಮುಂದೂಡಿಕೆ
3. ಪಾಕ್ ಆಕ್ರಮಿತ ಕಾಶ್ಮೀರದಲ್ಲಿ ಪುಲ್ವಾಮಾ ಭಯೋತ್ಪಾದಕ ದಾಳಿಯ ಪ್ರಮುಖ ಸಂಚುಗಾರನ ಹತ್ಯೆ
4. ಭಾರತಕ್ಕೆ ಅಗತ್ಯವಿರುವ ಇಂಧನ ಮಾರಾಟ ಮಾಡಲು ಸಿದ್ಧ - ಅಮೆರಿಕ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರೂಬಿಯೋ
5. ಐಎಪಿಎಲ್ ಟಿ-೨೦ ಕ್ರಿಕೆಟ್; ಚೆನ್ನೈ ಸೂಪರ್ ಕಿಂಗ್ಸ್ ವಿರುದ್ಧ ಗುಜರಾತ್ ಟೈಟನ್ಸ್‌ಗೆ ೮೯ ರನ್‌ಗಳ ಬೃಹತ್ ಗೆಲುವು

**********

ಭಾರತಕ್ಕೆ ಅಧಿಕೃತ ಭೇಟಿ ನೀಡಿರುವ ಸೈಪ್ರಸ್ ಅಧ್ಯಕ್ಷ ನಿಕೋಸ್ ಕ್ರಿಸ್ಟೋಡೌಲಿಡೀಸ್ ಅವರು ಇಂದು ನವದೆಹಲಿಯಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರೊಂದಿಗೆ ಉನ್ನತಮಟ್ಟದ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ನಿನ್ನೆ ಭಾರತಕ್ಕೆ ಆಗಮಿಸಿದ ಸೈಪ್ರಸ್ ಅಧ್ಯಕ್ಷರನ್ನು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಖಾತೆ ರಾಜ್ಯ ಸಚಿವ ಅಜಯ್ ತಮ್ಟಾ ಅವರು ವಿಮಾನ ನಿಲ್ದಾಣದಲ್ಲಿ ಬರಮಾಡಿಕೊಂಡರು. ಸೈಪ್ರಸ್ ಅಧ್ಯಕ್ಷರಾಗಿ ನಿಕೋಸ್ ಅವರು ಭಾರತಕ್ಕೆ ನೀಡುತ್ತಿರುವ ಮೊದಲ ಭೇಟಿ ಇದಾಗಿದ್ದು, ಅವರೊಂದಿಗೆ ಸೈಪ್ರಸ್ ವಿದೇಶಾಂಗ ಸಚಿವ ಡಾ. ಕಾನ್‌ಸ್ಟಂಟಿನೋಸ್ ಕೊಂಬೋಸ್ ಸೇರಿದಂತೆ ಉನ್ನತ ಮಟ್ಟದ ನಿಯೋಗ ಆಗಮಿಸಿದೆ.ಇಂದು ನಡೆಯಲಿರುವ ಈ ಮಹತ್ವದ ಸಭೆಯಲ್ಲಿ ಉಭಯ ನಾಯಕರು ವ್ಯಾಪಾರ, ಹೂಡಿಕೆ, ತಂತ್ರಜ್ಞಾನ, ರಕ್ಷಣೆ ಮತ್ತು ಭದ್ರತೆ, ಕೃತಕ ಬುದ್ಧಿಮತ್ತೆ, ಫಿನ್‌ಟೆಕ್ ಹಾಗೂ ಸಾಂಸ್ಕೃತಿಕ ವಲಯಗಳಲ್ಲಿ ದ್ವಿಪಕ್ಷೀಯ ಬಾಂಧವ್ಯವನ್ನು ಮತ್ತಷ್ಟು ಬಲಪಡಿಸುವ ಕುರಿತು ಸುದೀರ್ಘ ಚರ್ಚೆ ನಡೆಸಲಿದ್ದಾರೆ. ಮಾತುಕತೆಯ ನಂತರ ಹಲವು ಪ್ರಮುಖ ಒಪ್ಪಂದಗಳಿಗೆ ಉಭಯ ದೇಶಗಳು ಸಹಿ ಹಾಕಲಿವೆ. ಪ್ರಧಾನಿ ಅವರು ಸೈಪ್ರಸ್ ಅಧ್ಯಕ್ಷರ ಗೌರವಾರ್ಥ ಮಧ್ಯಾಹ್ನದ ಔತಣಕೂಟವನ್ನು ಆಯೋಜಿಸಿದ್ದು, ಇಂದು ಸಂಜೆ ಸೈಪ್ರಸ್ ಅಧ್ಯಕ್ಷರು ರಾಷ್ಟ್ರಪತಿ ಭವನದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಭೇಟಿ ಮಾಡಲಿದ್ದಾರೆ. ಕಳೆದ ವರ್ಷ ಜೂನ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಸೈಪ್ರಸ್‌ಗೆ ಭೇಟಿ ನೀಡಿದ ಕೇವಲ ಒಂದು ವರ್ಷದೊಳಗಾಗಿ ಈ ಭೇಟಿ ನಡೆಯುತ್ತಿರುವುದು ವಿಶೇಷವಾಗಿದೆ. ಸದ್ಯ ಸೈಪ್ರಸ್ ದೇಶವು ಐರೋಪ್ಯ ಒಕ್ಕೂಟ ಸಮಿತಿಯ ಅಧ್ಯಕ್ಷತೆಯನ್ನು ಹೊಂದಿರುವುದರಿಂದ ಹಾಗೂ ಮುಂದಿನ ವರ್ಷದ ಫೆಬ್ರವರಿಯಲ್ಲಿ ಉಭಯ ದೇಶಗಳ ರಾಜತಾಂತ್ರಿಕ ಸಂಬಂಧಕ್ಕೆ ೬೫ ವರ್ಷ ತುಂಬಲಿರುವ ಹಿನ್ನೆಲೆಯಲ್ಲಿ ಈ ಪ್ರವಾಸ ಹೆಚ್ಚಿನ ಪ್ರಾಮುಖ್ಯತೆ ಪಡೆದುಕೊಂಡಿದೆ.

**********

ಜೂನ್ ೧ ರಂದು ನವದೆಹಲಿಯಲ್ಲಿ ಆಯೋಜಿಸಲಾಗಿದ್ದ ಪ್ರಥಮ ಅಂತಾರಾಷ್ಟ್ರೀಯ ಬಿಗ್ ಕ್ಯಾಟ್ ಅಲಯನ್ಸ್ ಶೃಂಗಸಭೆಯನ್ನು ಕಾರಣಾಂತರಗಳಿಂದ ಮುಂದೂಡಲಾಗಿದೆ. ಈ ಶೃಂಗಸಭೆಯನ್ನು ನಾಲ್ಕನೇ 'ಭಾರತ-ಆಫ್ರಿಕಾ ವೇದಿಕೆ ಶೃಂಗಸಭೆ'ಯ ಜೊತೆಯಲ್ಲಿ ನಡೆಸಲು ತೀರ್ಮಾನಿಸಲಾಗಿತ್ತು. ಆಫ್ರಿಕಾದ ಹಲವು ದೇಶಗಳು ದೊಡ್ಡ ಬೆಕ್ಕುಗಳ ತಳಿಗಳನ್ನು ಹೊಂದಿರುವುದರಿಂದ ಹಾಗೂ ಜಾಗತಿಕ ವನ್ಯಜೀವಿ ಸಂರಕ್ಷಣೆ, ಪರಿಸರ ಸುಸ್ಥಿರತೆ ಮತ್ತು ಜೀವವೈವಿಧ್ಯದ ರಕ್ಷಣೆಯಲ್ಲಿ ಪ್ರಮುಖ ಪಾಲುದಾರರಾಗಿರುವುದರಿಂದ ಈ ಜಂಟಿ ಆಯೋಜನೆಗೆ ಸಿದ್ಧತೆ ನಡೆಸಲಾಗಿತ್ತು. ನಾಲ್ಕನೇ ಭಾರತ-ಆಫ್ರಿಕಾ ವೇದಿಕೆ ಶೃಂಗಸಭೆಯನ್ನು ಮುಂದಿನ ದಿನಗಳಲ್ಲಿ ನಡೆಸಲು ಆಫ್ರಿಕ ಒಕ್ಕೂಟದ ಅಧ್ಯಕ್ಷರು ಮತ್ತು ಆಫ್ರಿಕ ಒಕ್ಕೂಟ ಆಯೋಗದ ಜೊತೆ ಸಮಾಲೋಚಿಸಿ ನಿರ್ಧಾರ ಕೈಗೊಳ್ಳಲಾಗಿದೆ. ಈ ಹಿನ್ನೆಲೆಯಲ್ಲಿ ಮೊದಲನೇ ಐಬಿಸಿಎ ಶೃಂಗಸಭೆಯನ್ನೂ ಸಹ ಸದ್ಯಕ್ಕೆ ಮುಂದೂಡಲಾಗಿದ್ದು, ಮುಂಬರುವ ದಿನಗಳಲ್ಲಿ ದಿನಾಂಕಗಳನ್ನು ನಿಗದಿಪಡಿಸಲಾಗುವುದು ಎಂದು ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯ ತಿಳಿಸಿದೆ. ಶೃಂಗಸಭೆಯಲ್ಲಿ ಭಾಗವಹಿಸುವ ರಾಷ್ಟ್ರಗಳು ಮತ್ತು ಪ್ರಮುಖ ಪಾಲುದಾರರೊಂದಿಗೆ ಸಮಾಲೋಚನೆ ನಡೆಸಿದ ಬಳಿಕ ಹೊಸ ದಿನಾಂಕಗಳನ್ನು ಶೀಘ್ರದಲ್ಲೇ ಪ್ರಕಟಿಸಲಾಗುವುದು ಎಂದು ಸಚಿವಾಲಯದ ಪ್ರಕಟಣೆ ತಿಳಿಸಿದೆ.

**********

೪೦ಕ್ಕೂ ಹೆಚ್ಚು ಸಿಆರ್‌ಪಿಎಫ್ ಯೋಧರ ವೀರ ಮರಣಕ್ಕೆ ಕಾರಣವಾಗಿದ್ದ ೨೦೧೯ರ ಪುಲ್ವಾಮಾ ಭಯೋತ್ಪಾದನಾ ದಾಳಿಯ ಪ್ರಮುಖ ಸಂಚುಗಾರರಲ್ಲಿ ಒಬ್ಬನಾದ ಹಮ್ಜಾ ಬುರ್ಹಾನ್ ಅಲಿಯಾಸ್ ಅರ್ಜುಮಂಡ್ ಗುಲ್ಜಾರ್‌ದಾರ್ ನಿನ್ನೆ ಪಾಕ್ ಆಕ್ರಮಿತ ಜಮ್ಮು-ಕಾಶ್ಮೀರದಲ್ಲಿ ಅಪರಿಚಿತ ಬಂದೂಕುದಾರಿಗಳ ಗುಂಡಿಗೆ ಬಲಿಯಾಗಿದ್ದಾನೆ. ಅಲ್ ಬದ್ರ್ ಭಯೋತ್ಪಾದಕ ಸಂಘಟನೆಯ ಕಮಾಂಡರ್ ಆಗಿದ್ದ ಈತನನ್ನು ಜಮ್ಮು-ಕಾಶ್ಮೀರದಲ್ಲಿ ಸರಣಿ ಉಗ್ರ ಕೃತ್ಯಗಳನ್ನು ಎಸಗಿದ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರ ೨೦೨೨ರ ಏಪ್ರಿಲ್‌ನಲ್ಲಿ ಭಯೋತ್ಪಾದಕ ಎಂದು ಘೋಷಿಸಿತ್ತು. ಪುಲ್ವಾಮಾ ದಾಳಿಯ ನಂತರ ಪಾಕ್ ಆಕ್ರಮಿತ ಕಾಶ್ಮೀರದಲ್ಲಿ ತಲೆಮರೆಸಿಕೊಂಡಿದ್ದ ಈತ ಅಲ್ಲಿನ ಮುಜಫರಾಬಾದ್‌ನ ಗೋಜ್ರಾದಲ್ಲಿ ಖಾಸಗಿ ಕಾಲೇಜೊಂದರ ಪ್ರಾಂಶುಪಾಲರಾಗಿ ಕಾರ್ಯ ನಿರ್ವಹಿಸುತ್ತಿದ್ದ. ನಿನ್ನೆ ಬೆಳಗ್ಗೆ ಕಾಲೇಜಿನಿಂದ ಹೊರಗೆ ಬರುತ್ತಿದ್ದಂತೆ ಬಂದೂಕುದಾರಿಗಳು ಹತ್ತಿರದಿಂದ ಈತನ ಮೇಲೆ ಸರಣಿ ಗುಂಡಿನ ದಾಳಿ ನಡೆಸಿ, ಹತ್ಯೆ ಮಾಡಿದ್ದಾರೆ ಎಂದು ಸ್ಥಳೀಯ ಪೊಲೀಸರು ತಿಳಿಸಿದ್ದಾರೆ.

**********

ಭಾರತಕ್ಕೆ ಎಷ್ಟು ಪ್ರಮಾಣದ ಇಂಧನ ಅಗತ್ಯವಿದೆಯೋ ಅಷ್ಟನ್ನು ಮಾರಾಟ ಮಾಡಲು ಅಮೆರಿಕ ಸಿದ್ಧವಿದೆ ಎಂದು ಅಮೆರಿಕ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರೂಬಿಯೋ ತಿಳಿಸಿದ್ದಾರೆ. ಹಾರ್ಮುಜ್ ಜಲಸಂಧಿ ಮುಚ್ಚಲ್ಪಟ್ಟಿದ್ದರಿಂದ ಇಂಧನ ಬೆಲೆ ಏರಿಕೆಯಾಗಿ ಭಾರತದ ಮೇಲಾಗುತ್ತಿರುವ ಪರಿಣಾಮದ ಕುರಿತು ಮಾತನಾಡಿದ ಅವರು, ಭಾರತವನ್ನು ಅತ್ಯುತ್ತಮ ಪಾಲುದಾರ ದೇಶ ಎಂದು ಬಣ್ಣಿಸಿದರು. ಸ್ವೀಡನ್ ಮತ್ತು ಭಾರತ ಪ್ರವಾಸ ಕೈಗೊಳ್ಳುವ ಮುನ್ನ ಮಯಾಮಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಭೇಟಿಯು ಕ್ವಾಡ್ ಒಕ್ಕೂಟದ ರಾಷ್ಟ್ರಗಳ ವಿದೇಶಾಂಗ ಸಚಿವರನ್ನು ಭೇಟಿ ಮಾಡಲು ಲಭಿಸುತ್ತಿರುವ ಮಹತ್ವದ ಅವಕಾಶವಾಗಿದೆ ಎಂದರು. ಮಾರ್ಕೊ ರೂಬಿಯೋ ಅವರು ನಾಳೆಯಿಂದ ೨೬ ರವರೆಗೆ ಭಾರತ ಪ್ರವಾಸ ಕೈಗೊಳ್ಳಲಿದ್ದು, ಕೋಲ್ಕತ್ತಾ, ಆಗ್ರಾ, ಜೈಪುರ ಮತ್ತು ನವದೆಹಲಿಗೆ ಭೇಟಿ ನೀಡಲಿದ್ದಾರೆ. ಮೇ ೨೬ ರಂದು ವಿದೇಶಾಂಗ ಸಚಿವ ಎಸ್. ಜೈಶಂಕರ್ ಅವರ ಅಧ್ಯಕ್ಷತೆಯಲ್ಲಿ ನಡೆಯಲಿರುವ ಕ್ವಾಡ್ ಸಭೆಯಲ್ಲಿ ಅವರು ಭಾಗವಹಿಸಲಿದ್ದಾರೆ. ಈ ನಡುವೆ ರೂಬಿಯೋ ಅವರ ಕೋಲ್ಕತ್ತಾ ಭೇಟಿಯು ಕಳೆದ ೧೪ ವರ್ಷಗಳಲ್ಲಿ ಅಮೆರಿಕದ ವಿದೇಶಾಂಗ

ಕಾರ್ಯದರ್ಶಿಯೊಬ್ಬರು ಆ ನಗರಕ್ಕೆ ನೀಡುತ್ತಿರುವ ಮೊದಲ ಭೇಟಿಯಾಗಿದ್ದು, ಈ ಹಿಂದೆ ೨೦೧೨ ರಲ್ಲಿ ಹಿಲರಿ ಕ್ಲಿಂಟನ್ ಭೇಟಿ ನೀಡಿದ್ದರು.

**********

ಭಾರತೀಯ ರೈಲ್ವೆ ಆಹಾರ ಸರಬರಾಜು ಮತ್ತು ಪ್ರವಾಸೋದ್ಯಮ ನಿಗಮ - ಐಆರ್‌ಸಿಟಿಸಿ ೨೦೨೮-೨೭ರ ಪ್ರವಾಸಿ ಹಂಗಾಮಿಗಾಗಿ ಅತ್ಯಾಧುನಿಕ ಸೌಲಭ್ಯಗಳು ಹಾಗೂ ಆಕರ್ಷಕ ರಿಯಾಯಿತಿ ಕೊಡುಗೆಗಳನ್ನೊಳಗೊಂಡ ನವೀಕೃತ 'ಗೋಲ್ಡನ್ ಚಾರಿಯಟ್' ಐಷಾರಾಮಿ ಪ್ರವಾಸಿ ರೈಲನ್ನು ಮರುಚಾಲನೆಗೊಳಿಸುವುದಾಗಿ ಘೋಷಿಸಿದೆ. ದಕ್ಷಿಣ ಭಾರತದ ಶ್ರೀಮಂತ ಸಾಂಸ್ಕೃತಿಕ ಪರಂಪರೆ ಮತ್ತು ನೈಸರ್ಗಿಕ ಸೌಂದರ್ಯವನ್ನು ಅನಾವರಣಗೊಳಿಸುವ ಈ ಪ್ರತಿಷ್ಠಿತ ರೈಲು, ಸಾಂಪ್ರದಾಯಿಕ ವೈಭವ ಹಾಗೂ ಆಧುನಿಕ ಸೌಕರ್ಯಗಳ ಸಮ್ಮಿಲನದೊಂದಿಗೆ ಹೊಸ ರೂಪದಲ್ಲಿ ಮರಳಿದೆ ಎಂದು ಐಆರ್‌ಸಿಟಿಸಿ ತಿಳಿಸಿದೆ. ಈ ಐಷಾರಾಮಿ ರೈಲಿನಲ್ಲಿ ಆಕರ್ಷಕ ಒಳಾಂಗಣ ವಿನ್ಯಾಸ, ಸುಸಜ್ಜಿತ ಕ್ಯಾಬಿನ್‌ಗಳು, ಸ್ಮಾರ್ಟ್ ಟಿವಿ ಹಾಗೂ ವೈ-ಫೈ ಆಧಾರಿತ ಮನರಂಜನಾ ವ್ಯವಸ್ಥೆಗಳನ್ನು ಕಲ್ಪಿಸಲಾಗಿದೆ. ಒಟ್ಟು ೪೦ ಅತ್ಯಾಧುನಿಕ ಕ್ಯಾಬಿನ್‌ಗಳನ್ನು ಹೊಂದಿರುವ ಈ ರೈಲಿನಲ್ಲಿ ಏಕಕಾಲಕ್ಕೆ ೮೦ ಅತಿಥಿಗಳಿಗೆ ಪ್ರಯಾಣಿಸಲು ಅವಕಾಶವಿದ್ದು, ಇದರಲ್ಲಿ ಡಬಲ್ ಬೆಡ್, ಟ್ವಿನ್ ಬೆಡ್ ಹಾಗೂ ವಿಶೇಷಚೇತನ ಪ್ರಯಾಣಿಕರಿಗಾಗಿಯೇ ವಿನ್ಯಾಸಗೊಳಿಸಲಾದ ವಿಶೇಷ ಕ್ಯಾಬಿನ್ ವ್ಯವಸ್ಥೆ ಇರುವುದು ಪ್ರಮುಖ ಆಕರ್ಷಣೆಯಾಗಿದೆ.

**********

ಕೇಂದ್ರ ರೈಲ್ವೆ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ಇಂದಿನಿಂದ ರಾಜಸ್ತಾನಕ್ಕೆ ಎರಡು ದಿನಗಳ ಪ್ರವಾಸ ಕೈಗೊಳ್ಳಲಿದ್ದಾರೆ. ಈ ವೇಳೆ ಅವರು, ರಾಜ್ಯದ ಹಲವು ಹೊಸ ರೈಲ್ವೆ ಸೌಲಭ್ಯಗಳನ್ನು ಲೋಕಾರ್ಪಣೆಗೊಳಿಸಲಿದ್ದಾರೆ. ಜೋಧ್‌ಪುರ ರೈಲ್ವೆ ನಿಲ್ದಾಣದಲ್ಲಿ ಆಯೋಜಿಸಲಾಗಿರುವ ಮುಖ್ಯ ಕಾರ್ಯಕ್ರಮದಲ್ಲಿ ಅವರು, ಜೋಧ್‌ಪುರ-ದೆಹಲಿ ಕಂಟೋನ್ಮೆಂಟ್ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲಿನ ನವೀಕೃತ ೨೦ ಬೋಗಿಗಳ ಸೇವೆಗೆ ಹಸಿರು ನಿಶಾನೆ ತೋರಲಿದ್ದಾರೆ. ಬಳಿಕ ಜಾಲೋರ್‌ನಲ್ಲಿ ಬುಜ್ - ನವದೆಹಲಿ ನೂತನ ರೈಲ್ವೆ ಸೇವೆಗೆ ಚಾಲನೆ ನೀಡಲಿರುವ ಸಚಿವರು, ಪಾಲಿ ಜಿಲ್ಲೆಗೆ ಭೇಟಿ ನೀಡಿ, ಅಮೃತ್ ಭಾರತ್ ನಿಲ್ದಾಣ್ ಯೋಜನೆ ಅಡಿಯ ಕಾಮಗಾರಿಗಳನ್ನು ಪರಿಶೀಲಿಸಲಿದ್ದಾರೆ. ನಾಳೆ ಜೈಪುರದಲ್ಲಿ ಆಯೋಜಿಸಲಾಗಿರುವ ಉದ್ಯೋಗ ಮೇಳದಲ್ಲಿ ಭಾಗವಹಿಸಿ, ಅಭ್ಯರ್ಥಿಗಳಿಗೆ ನೇಮಕಾತಿ ಪತ್ರ ವಿತರಿಸಲಿದ್ದಾರೆ.

**********

ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಿನ್ನೆ ರಾತ್ರಿ ನಡೆದ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಗುಜರಾತ್ ಟೈಟನ್ಸ್ ತಂಡ, ಚೆನ್ನೈ ಸೂಪರ್ ಕಿಂಗ್ಸ್ ತಂಡವನ್ನು ೮೯ ರನ್‌ಗಳಿಂದ ಸೋಲಿಸಿತು. ಹೈದರಾಬಾದ್‌ನಲ್ಲಿಂದು ಸನ್‌ರೈಸರ್ಸ್ ಹೈದರಾಬಾದ್ ತಂಡ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವನ್ನು ಎದುರಿಸಲಿದೆ. ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ.

**********

ಕೋಲ್ಕತ್ತಾದ ಆರ್‌ಜಿ ಕರ್ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ತರಬೇತಿ ವೈದ್ಯೆಯ ಮೇಲಿನ ಅತ್ಯಾಚಾರ ಮತ್ತು ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ, ಕಲ್ಕತ್ತಾ ಹೈಕೋರ್ಟ್ ಮಹತ್ವದ ಆದೇಶ ನೀಡಿದೆ. ದುರಂತ ಸಂಭವಿಸಿದ ೨೦೨೪ರ ಆಗಸ್ಟ್ ೯ರ ರಾತ್ರಿ ಸಂತ್ರಸ್ತೆ ರಾತ್ರಿಯ ಊಟ ಸೇವಿಸಿದ ಸಮಯದಿಂದ ಹಿಡಿದು, ಮರುದಿನ ಸಂಜೆ ಆಕೆಯ ಅಂತ್ಯಕ್ರಿಯೆ ನೆರವೇರುವವರೆಗಿನ ಎಲ್ಲಾ ಬೆಳವಣಿಗೆಗಳ ಬಗ್ಗೆ ತನಿಖೆ ನಡೆಸಲು ಕೇಂದ್ರೀಯ ತನಿಖಾ ದಳ - ಸಿಬಿಐನ ಮೂರು ಸದಸ್ಯರ ವಿಶೇಷ ತನಿಖಾ ತಂಡವನ್ನು ರಚಿಸುವಂತೆ ಹೈಕೋರ್ಟ್ ಆದೇಶಿಸಿದೆ. ದೇಶಾದ್ಯಂತ ಭಾರಿ ಆಕ್ರೋಶಕ್ಕೆ ಕಾರಣವಾಗಿದ್ದ ಈ ಘಟನೆಯ ತಕ್ಷಣದ ದಿನಗಳಲ್ಲಿ ಸಾಕ್ಷ್ಯಗಳನ್ನು ನಾಶಪಡಿಸಲಾಗಿದೆ ಮತ್ತು ಪ್ರಕರಣವನ್ನು ಮುಚ್ಚಿಹಾಕಲು ಯತ್ನಿಸಲಾಗಿದೆ ಎಂಬ ಗಂಭೀರ ಆರೋಪಗಳು ಕೇಳಿಬಂದಿದ್ದವು. ಈ ಹಿನ್ನೆಲೆಯಲ್ಲಿ ನಿನ್ನೆ ಆದೇಶ ಹೊರಡಿಸಿರುವ ನ್ಯಾಯಮೂರ್ತಿಗಳಾದ ಶಂಪಾ ಸರ್ಕಾರ್ ಮತ್ತು ತೀರ್ಥಂಕರ್ ಘೋಷ್ ಅವರಿದ್ದ ವಿಭಾಗೀಯ ಪೀಠವು, ಸಿಬಿಐನ ಪೂರ್ವ ವಲಯ ಜಂಟಿ ನಿರ್ದೇಶಕರು ಈ ವಿಶೇಷ ತಂಡದ ನೇತೃತ್ವ ವಹಿಸಲಿದ್ದಾರೆ ಎಂದು ತಿಳಿಸಿದೆ. ತಂಡದ ಉಳಿದ ಇಬ್ಬರು ಸದಸ್ಯರನ್ನು ನ್ಯಾಯಾಲಯದ ಆದೇಶದ ೪೮ ಗಂಟೆಗಳ ಒಳಗಾಗಿ ನಿರ್ಧರಿಸಲಾಗುವುದು ಎಂದು ಪೀಠ ತಿಳಿಸಿದೆ.

******END****